## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 1758(2100)<br>(ಒಳಾಡಳಿತ ಇಲಾಖೆಯಿಂದ ವರ್ಗಾವಣೆಗೊಂಡಿರುತ್ತದೆ) |
| **ಸದಸ್ಯರ ಹೆಸರು** | : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ<br>(ಪದವೀಧರರ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : 17.03.2022 |
| **ಉತ್ತರಿಸುವ ಸಚಿವರು** | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ದಿನಾಂಕ: 01.04.2006ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ: FD(SPL)04 PET 2005 ದಿನಾಂಕ: 01.04.2006ರನ್ವಯ ನೂತನ ಪಿಂಚಣಿ ಯೋಜನೆ ಅನ್ವಯವಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ: :ಆಇ 34 ಪಿಇಎನ್ 2018 ದಿನಾಂಕ; 23.06.2018ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ.<br><br>**ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ :**<br>ದಿನಾಂ:01.4.2006ರ ಪಿಂಚಣಿ ನೀತಿಯಲ್ಲಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಮೇಲ್ಕಂಡ ಸರ್ಕಾರದ ಆದೇಶದ ಕ್ರಮ ಸಂಖ್ಯೆ: 8ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.<br>...(8) ಸಹಾಯಾನುದಾನದ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ: 01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು, ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ.<br>• ಈ ಆದೇಶವು ದಿನಾಂಕ: 01.04.2006ರಿಂದ ಜಾರಿಗೆ ಬಂದಿರುತ್ತದೆ.<br>• ದಿನಾಂಕ:01.04.2006ರ ನಂತರ ಅನುದಾನ ಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ. |

| | | |
|---|---|---|
| | | • ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ, 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ(NPS) ವ್ಯಾಪ್ತಿಗೆ ಒಳಪಡುತ್ತಾರೆ.<br>ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ (optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ. |
| ಆ | ಈ ಸಂಸ್ಥೆಗಳ ಸಿಬ್ಬಂದಿಗಳಿಗೆ ಹಳೆ ಪಿಂಚಣಿ, ಹೊಸ ಪಿಂಚಣಿಯೂ ಇಲ್ಲದೇ ನಿವೃತ್ತಿಯ ನಂತರದ ಜೀವನ ದುಸ್ತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ, |
| ಇ | ಈ ನೌಕರರಿಗೆ ಸದರಿ ಸೌಲಭ್ಯವನ್ನು ಒದಗಿಸಲು ಸರ್ಕಾರ ಕ್ರಮವಹಿಸುವುದೇ? (ವಿವರಣೆ ನೀಡುವುದು) | ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ: 01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿ ಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು, ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ. |

ಇಪಿ 116 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು